ಸಂಸ್ಥೆಗೆ ಬಿಡುಗಡೆ ಮಾಡಿ ಸದರಿ ಹೊರಗುತ್ತಿಗೆ ಸಂಸ್ಥೆಯಿಂದ ಸಮರ್ಪಕವಾಗಿ ಸಂದಾಯ ಮಾಡಲಾಗುತ್ತಿದೆ.

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಉದ್ಭವಿಸುವುದಿಲ್ಲ.

ರಾಜ್ಯದಲ್ಲಿರುವ ಗಾರ್ಮೆಂಟ್ ಕಾರ್ಮಿಕರ ಹಿತಾಸಕ್ತಿ ಕಾಪಾಡುವುದು

425 (733) ಶ್ರೀ ಮುನಿರಾಜು ಎಸ್ (ದಾಸರಹಳ್ಳಿ) : ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಮತ್ತು ವಿಶೇಷವಾಗಿ ಬೆಂಗಳೂರು ನಗರದಲ್ಲಿ ಕೆಲಸ ಮಾಡುತ್ತಿರುವ ಗಾರ್ಮೆಂಟ್ ನೌಕರರ ಸಂಖ್ಯೆ ಎಷ್ಟು (ವಿವರ ನೀಡುವುದು);

ಆ) ಈ ಕಾರ್ಮಿಕರ ಹಿತ ಕಾಪಾಡಲು ಆರೋಗ್ಯ ಮತ್ತು ಉದ್ಯೋಗ ರಕ್ಷಣೆ ನೀಡಲು ಸರ್ಕಾರದ ನಿಲುವೇನು?

ಶ್ರೀ ಎನ್. ಬಚ್ಚೇಗೌಡ (ಕಾರ್ಮಿಕ ಸಚಿವರು) :

ಅ) ಬೆಂಗಳೂರಿನಲ್ಲಿ 776 ಕಾರ್ಖಾನೆಗಳು ಕಾರ್ಖಾನೆಗಳ ಕಾಯ್ದೆ 1948ರ ಅಡಿ ನೋಂದಾವಣೆಗೊಂಡಿರುತ್ತವೆ.

ನೊಂದಾಯಿತ ಕಾರ್ಖಾನೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರ ಸಂಖ್ಯೆ ಈ ಕೆಳಕಂಡಂತಿದೆ;

1. ಪುರುಷರು – 84,593
2. ಮಹಿಳೆಯರು – 2,02,848

ಒಟ್ಟು – 2,87,441

ಆ) ಗಾರ್ಮೆಂಟ್ ಕಾರ್ಖಾನೆಗಳಲ್ಲಿ ಕಾರ್ಯನಿರ್ವಹಿಸುವ ಬಹುತೇಕ ಕಾರ್ಮಿಕರು ಮಾಹೆಯಾನ ರೂ.10,000/– ಕ್ಕಿಂತ ಕಡಿಮೆ ವೇತನ ಪಡೆಯುತ್ತಿದ್ದು, ಈ ಎಲ್ಲಾ ಕಾರ್ಮಿಕರು ಇ.ಎಸ್.ಐ ಯೋಜನೆಗೆ ಒಳಪಟ್ಟಿರುತ್ತಾರೆ. ಅವರಿಗೆ ಮತ್ತು ಅವರ ಕುಟುಂಬ ವರ್ಗಕ್ಕೆ ಆರೋಗ್ಯ ರಕ್ಷಣೆಯನ್ನು ಇ.ಎಸ್.ಐ ಒದಗಿಸುತ್ತಿದೆ. ಅಲ್ಲದೆ 500 ಜನ ಕಾರ್ಮಿಕರಿಗಿಂತ ಹೆಚ್ಚಿನ ಕಾರ್ಮಿಕರನ್ನು ನೇಮಿಸಿಕೊಂಡಿರುವ ಕಾರ್ಖಾನೆಗಳಲ್ಲಿ ಕಾರ್ಖಾನೆಗಳ

ಕಾಯ್ದೆ 1948ರ ಅಡಿಯಲ್ಲಿ ಆರೋಗ್ಯ ಸೌಲಭ್ಯ ಒದಗಿಸಲಾಗುತ್ತಿದೆ. ಕಾರ್ಮಿಕರ ಹಿತ ಕಾಪಾಡುವ ದೃಷ್ಟಿಯಿಂದ ಸರ್ಕಾರ ಕಳೆದ ಎರಡೂವರೆ ವರ್ಷಗಳಿಂದ **ಮಹಿಳಾ ಹಕ್ಕು ತರಬೇತಿ ಮತ್ತು ಸುರಕ್ಷತಾ ಉಸ್ತುವಾರಿ ಕೇಂದ್ರ** ಎಂಬ ಯೋಜನೆ ಅಡಿ ಹಲವಾರು ಕಾನೂನು ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ.

ಉದ್ಯೋಗ ರಕ್ಷಣೆ ನೀಡಲು ಈಗಾಗಲೇ ಹಲವಾರು ಕಾರ್ಮಿಕರ ಕಾನೂನುಗಳು ಜಾರಿಯಲ್ಲಿರುತ್ತವೆ. ಅವುಗಳನ್ನು ಸಂಬಂಧಪಟ್ಟ ಇಲಾಖೆಗಳು ಸಮರ್ಥನೀಯವಾಗಿ ಜಾರಿಗೆ ತರುವಲ್ಲಿ ಕಾರ್ಯನಿರತವಾಗಿವೆ. ಮೇಲಿನ ವಿಷಯಗಳಲ್ಲಿ ದೂರುಗಳು ಸ್ವೀಕೃತವಾದಲ್ಲಿ ಅವುಗಳನ್ನು ನಿವಾರಿಸಲು ಆದ್ಯತೆಯ ಮೇರೆಗೆ ಕ್ರಮ ಕೈಗೊಳ್ಳಲಾಗುತ್ತಿದೆ.

ಅನಾಥ ಹಾಗೂ ವೃದ್ಧಾಶ್ರಮಗಳ ಸುಧಾರಣೆ ಬಗ್ಗೆ

426 (734) ಶ್ರೀ ಮುನಿರಾಜು. ಎಸ್ (ದಾಸರಹಳ್ಳಿ) : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅನಾಥ ವೃದ್ಧರಿಗೆ ಬೆಂಗಳೂರು ನಗರದಲ್ಲಿ ಸರ್ಕಾರದ ವತಿಯಿಂದ ನಡೆಸಲಾಗುತ್ತಿರುವ ವೃದ್ಧಾಶ್ರಮಗಳ ಒಟ್ಟು ಸಂಖ್ಯೆ ಎಷ್ಟು;

ಆ) ಪ್ರತಿ ವೃದ್ಧಾಶ್ರಮದಲ್ಲಿರುವ ಒಟ್ಟು ಫಲಾನುಭವಿಗಳ ಸಂಖ್ಯೆ ಹಗೂ ವೃದ್ಧಾಶ್ರಮಕ್ಕೆ ತುಂಬಿಕೊಳ್ಳಬಹುದಾದ ಫಲಾನುಭವಿಗಳ ಸಂಖ್ಯೆ ಎಷ್ಟು;

ಇ) ಬೆಂಗಳೂರು ನಗರ ಹಾಗೂ ಕರ್ನಾಟಕದಾದ್ಯಂತ ಸ್ವಯಂ ಸೇವಾ ಸಂಸ್ಥೆಗಳ ಮುಖಾಂತರ ನಡೆಸುತ್ತಿರುವ ವೃದ್ಧಾಶ್ರಮಗಳ ಸಂಖ್ಯೆ ಎಷ್ಟು;

ಈ) ಸರ್ಕಾರದ ವತಿಯಿಂದ ಕರ್ನಾಟಕ ರಾಜ್ಯದ ಪ್ರತಿ ಜಿಲ್ಲೆಯಲ್ಲಿ ವೃದ್ಧಾಶ್ರಮಗಳನ್ನು ಪ್ರಾರಂಭಿಸಲಾಗುತ್ತಿದೆಯೇ?

ಶ್ರೀ ಪಿ.ಎಂ. ನರೇಂದ್ರಸ್ವಾಮಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು) :

ಅ) ರಾಜ್ಯ ಸರ್ಕಾರದ ಅನುದಾನದಿಂದ ಎರಡು ಹಾಗೂ ಕೇಂದ್ರ ಸರ್ಕಾರದ ಅನುದಾನದಿಂದ 8 ವೃದ್ಧಾಶ್ರಮಗಳನ್ನು ಬೆಂಗಳೂರು ನಗರದಲ್ಲಿ ಸ್ವಯಂ ಸೇವಾ ಸಂಸ್ಥೆಗಳಿಂದ ನಡೆಸಲಾಗುತ್ತಿದೆ.